ಎ-330-(ಕ)
8/12/20

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ರವರು ನಿಯಮ 330 ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ**

ವಿಷಯ:- "ಸರ್ಕಾರ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಮೇಲೆ ಸುತ್ತೋಲೆ ಸಂಖ್ಯೆ: ಆಇ/157/ವೆಚ್ಚ-8/2020, ದಿನಾಂಕ:10.06.2020 ರಲ್ಲಿ ಕೋವಿಡ್-19 ಹಿನ್ನೆಲೆಯಲ್ಲಿ ಅನುಮೋದನೆ ನೀಡಲು ಸಾಧ್ಯವಿಲ್ಲವೆಂದು ಸುತ್ತೋಲೆ ಹೊರಡಿಸಿರುವುದರಿಂದ ಅನುದಾನಿತ ಪ್ರಾಥಮಿಕ, ಪ್ರೌಢ, ಪದವಿಪೂರ್ವ ಮತ್ತು ಪದವಿ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ ಇನ್ನಿತರೆ ಕಾರಣಗಳಿಂದ ಖಾಲಿಯಾಗಿರುವ ಬೋಧಕರ ಹುದ್ದೆಗಳ ಭರ್ತಿಯ ಸಂಬಂಧದ ಪ್ರಸ್ತಾವನೆಗಳು ಹಾಗೂ 1986 ರಿಂದ 1995ನೇ ಸಾಲಿನವರೆಗೆ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೊಳಪಡಿಸುವ ಸಂಬಂಧ ಸಲ್ಲಿಸಲಾಗಿರುವ ಪ್ರಸ್ತಾವನೆಗಳು ಸರ್ಕಾರದ ಹಂತದಲ್ಲಿ ಬಾಕಿ ಇರುವುದರಿಂದ ಶೈಕ್ಷಣಿಕ ಪ್ರಗತಿ ಕುಂಠಿತವಾಗಿರುವ ಗಂಭೀರ ಸಮಸ್ಯೆ ಕುರಿತು ಉಂಟಾದ ಗಂಭೀರ ಸಮಸ್ಯೆಯ ಬಗ್ಗೆ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯ ಬಯುಸುತ್ತೇನೆ."

ಉತ್ತರ:- ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020 ರನ್ವಯ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಇತರೆ ಯಾವುದೇ ಕಾರಣಗಳಿಂದ ಖಾಲಿಯಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆ ಹಾಗೂ ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020 ರನ್ವಯ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್ ಲಾಗ್ ಹುದ್ದೆಗಳೂ ಸೇರಿದಂತೆ ರಾಜ್ಯ ಸಿವಿಲ್ ಸೇವೆಯಲ್ಲಿನ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸಹ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.

ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಉದ್ದೇಶಕ್ಕೆ ಕೈಗೊಂಡಿರುವ ಕ್ರಮಗಳಲ್ಲಿ ನೇಮಕಾತಿಗಳನ್ನು ತಡೆಹಿಡಿದಿರುವುದು ಸೇರಿದೆ. ಸರ್ಕಾರದ ಎಲ್ಲಾ ಇಲಾಖೆಗಳಲ್ಲಿನ ನೇಮಕಾತಿಯನ್ನು ತಡೆ ಹಿಡಿದಿರುವುದರಿಂದ ಖಾಸಗಿ ಸಂಸ್ಥೆಗಳಿಗೆ ಮಾತ್ರ ನೇಮಕಾತಿಗೆ ಅವಕಾಶ ನೀಡುವುದು ಸೂಕ್ತವಲ್ಲ.

ಸಂಖ್ಯೆ:ಆಇ 241 ವೆಚ್ಚ-8/2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯ ಮಂತ್ರಿ